## ದಿನಾಂಕ :14-11-2020 ರಂದು ಮಧ್ಯಾಹ್ನ 3.30 ಗಂಟೆಗೆ ವಾರ್ಡ್ ಸಂಖ್ಯೆ-182 ರ ವಾರ್ಡ್ ಸಮಿತಿಯ ಸಭೆಯ ನಡವಳಿಗಳು :-

### ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು.

1) ಶ್ರೀ ನರಸಿಂಹಮೂರ್ತಿ ಜಂಟಿ ಆಯುಕ್ತರು ದಾಸರಹಳ್ಳಿ, ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ.

2) ಶ್ರೀ ದೇವರಾಜ್, ಕಿರಿಯ ಅಭಿಯಂತರರು, ಬೆಸ್ಕಾಂ ಎಸ್-9 ಉಪ ವಿಭಾಗ.

3) ಶ್ರೀ ಶಿವರುದ್ರ, ಹಿರಿಯ ಆರೋಗ್ಯ ಪರಿವೀಕ್ಷಕರು, ಬಿ.ಬಿ.ಎಂ.ಪಿ

4) ಶ್ರೀ ಶಂಕರ್ ಬಹದ್ದೂರ್ ಸಿಂಗ್, ಕಿರಿಯ ಆರೋಗ್ಯ ಪರಿವೀಕ್ಷಕರು, ಬಿ.ಬಿ.ಎಂ.ಪಿ

5) ಶ್ರೀ ಹರೀಶ್, ಉಪ ವಲಯ ಅರಣ್ಯಾಧಿಕಾರಿಗಳು, ಬಿ.ಬಿ.ಎಂ.ಪಿ

6) ಶ್ರೀಮತಿ ಐಶ್ವರ್ಯ.ಬಿ.ಎ, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ

7) ಶ್ರೀ ಸುಬ್ಬರಾವ್, ಎ.ಎಸ್.ಐ ಬನಶಂಕರಿ ಟ್ರಾಫಿಕ್ ಪೋಲೀಸ್ ಠಾಣೆ.

8) ಶ್ರೀ ಅಪ್ಪಾಜಿ ಎ.ಎಸ್.ಐ ಬನಶಂಕರಿ ಟ್ರಾಫಿಕ್ ಪೋಲೀಸ್ ಠಾಣೆ.

ವಾರ್ಡ್ ಸಮಿತಿ ಸಂಚಾಲಕರು ಮತ್ತು ಸಹಾಯಕ ಅಭಿಯಂತರರು ಪದ್ಮನಾಭನಗರ ಬಡಾವಣೆ ವಾರ್ಡ್ ಸಂಖ್ಯೆ-182 ರವರಾದ ಶ್ರೀ ರಾಘವೇಂದ್ರಟಿ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿಯ ಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಗುರುರಾಜ ಬಡಾವಣೆಯ 9ನೇ ಮುಖ್ಯರಸ್ತೆಯಲ್ಲಿ ಬೃಹತ್ ಮಳೆ ನೀರುಗಾಲುವೆ ಬಳಿ ಮಳೆಯ ಸಮಯದಲ್ಲಿ ನೀರು ನಿಲ್ಲುತ್ತಿದ್ದು, ಸದರಿ ಸಮಸ್ಯೆಯನ್ನು ಪರಿಹರಿಸಿಕೊಡಲು ಗುರುರಾಜ ಬಡಾವಣೆ ನಿವಾಸಿಗಳು ಈ ಹಿಂದಿನ ಸಭೆಯಲ್ಲಿ ಕೋರಿದ್ದರು. ಸದರಿ ವಿಷಯವಾಗಿ ಬಡಾವಣೆಯ ಸರ್ವೆ ನಕ್ಷೆಯನ್ನು ತಯಾರಿಸಲಾಗಿದ್ದು, ಅಂದಾಜು ಪಟ್ಟಿಯನ್ನು ಸಿದ್ಧಪಡಿಸಲಾಗುತ್ತಿದೆ ಎಂದು ಸಹಾಯಕ ಅಭಿಯಂತರರು ಸಭೆಗೆ ತಿಳಿಸಿದರು.

2) ಗುರುರಾಜ ಬಡಾವಣೆಯ 7ನೇ ಮತ್ತು 6ನೇ ಮುಖ್ಯರಸ್ತೆಯಲ್ಲಿ ಮಳೆ ನೀರನ್ನು ಬಿ.ಡಬ್ಲ್ಯೂ.ಎಸ್.ಎಸ್.ಬಿ ಛೇಂಬರ್‌ಗಳಿಗೆ ಸಂಪರ್ಕ ನೀಡಲಾಗಿದ್ದು, ಸದರಿ ಸಂಪರ್ಕಗಳನ್ನು ಕಡಿತಗೊಳಿಸಬೇಕಾಗಿ ಬಡಾವಣೆ ನಿವಾಸಿಗಳು ಈ ಹಿಂದಿನ ಸಭೆಯಲ್ಲಿ ಕೋರಿದ್ದರು. ಆದರೆ ಈವರೆವಿಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಯಾವುದೇ ಕ್ರಮ ಕೈಗೊಳ್ಳದಿರುವುದನ್ನು ಗಮನಿಸಿದ ನೋಡೆಲ್ ಅಧಿಕಾರಿಯವರು ಕೂಡಲೇ ಕ್ರಮ ಜರುಗಿಸುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

3) ಶ್ರೀನಿವಾಸ ಟೆಂಟ್ ಬಳಿ ಇರುವ ಕಸದ ಬ್ಲಾಕ್ ಸ್ಪಾಟ್ ಅನ್ನು ಕೂಡಲೇ ತೆರವುಗೊಳಿಸುವಂತೆ ಗೌಡನಪಾಳ್ಯ ನಿವಾಸಿಗಳು ಕೋರಿದರು. ಈ ವಿಷಯವಾಗಿ ಕ್ರಮ ವಹಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರವರಿಗೆ ಸೂಚಿಸಲಾಯಿತು.

Scanned by CamScanner

4) ಪದ್ಮನಾಭನಗರದ 5ನೇ ಮುಖ್ಯರಸ್ತೆಯಲ್ಲಿ ವಿದ್ಯುತ್ ದೀಪವೊಂದು ಅಪಾಯಕಾರಿ ಸ್ಥಿತಿಯಲ್ಲಿರುವುದನ್ನು ತಪಾಸಣೆ ವೇಳೆ ಗಮನಿಸಿರುವುದಾಗಿ ನೋಡೆಲ್ ಅಧಿಕಾರಿಯವರು ಈ ಹಿಂದಿನ ಸಭೆಯಲ್ಲಿ ತಿಳಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳದಿರುವುದನ್ನು ಗಮನಿಸಿ ಕೂಡಲೇ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

5) ಬಿ.ಹೆಚ್.ಸಿ.ಎಸ್ ಬಡಾವಣೆಯ 7ನೇ ಮುಖ್ಯರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ವತಿಯಿಂದ ಕೊಳವೆ ಮಾರ್ಗಕ್ಕಾಗಿ ರಸ್ತೆ ಅಗೆದಿರುವುದನ್ನು ದುರಸ್ಥಿ ಪಡಿಸದೇ ಇರುವುದನ್ನು ಬಡಾವಣೆ ನಿವಾಸಿಗಳು ಸಭೆಗೆ ತಿಳಿಸಿದರು. ಈ ವಿಷಯವಾಗಿ ಕೂಡಲೇ ಕ್ರಮ ಜರುಗಿಸುವಂತೆ ನೋಡೆಲ್ ಅಧಿಕಾರಿಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಿದರು.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಗೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ಅವರನ್ನು ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು
ಹಾಗೂ ಸಹಾಯಕ ಅಭಿಯಂತರರು

ವಾರ್ಡ್ 182 ರ ನೋಡಲ್ ಅಧಿಕಾರಿ
ಹಾಗೂ ಜಂಟಿ ಆಯುಕ್ತರು, ದಾಸರಹಳ್ಳಿ ವಲಯ.

Scanned by CamScanner